# ಕರ್ನಾಟಕ ಲೋಕಾಯುಕ್ತ

**ನಂ.ಕಂಪ್ಲೆಂಟ್/ಉಪಲೋಕ್/ಬಿಡಿ-2569/2015/ಡಿಆರ್ಇ-1**

ಬಹುಮಹಡಿಗಳ ಕಟ್ಟಡ,
ಡಾ:ಅಂಬೇಡ್ಕರ್ ವೀದಿ,
ಬೆಂಗಳೂರು.
ದಿನಾಂಕ : 09/02/2017

## ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ರ ಕಲಂ 12(1) ರನ್ವಯ ವರದಿ

**ವಿಷಯ:** ಶ್ರೀ.ಟಿ.ಸಿದ್ದೇಶಪ್ಪ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ಯರಗನಾಳು ಗ್ರಾಮ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, ಇವರ ವಿರುದ್ಧ ಸಲ್ಲಿಸಿದ ದೂರಿನ ಸಂಬಂಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1) ರಡಿಯಲ್ಲಿನ ವರದಿ.

******

1) ಶ್ರೀ.ಎಸ್.ಮಂಜುನಾಥ ಬಿನ್ ಸಣ್ಣಹನುಮಪ್ಪ, ಮಲ್ಲಿಗೇನಹಳ್ಳಿ ಗ್ರಾಮ, ಬೆಳಗುತ್ತಿ ಹೋಬಳಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ರವರು ಸರ್ಕಾರಿ/ಸಾರ್ವಜನಿಕ ನೌಕರರಾದ ಶ್ರೀ.ಟಿ.ಸಿದ್ದೇಶಪ್ಪ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತ, ಯರಗನಾಳು ಗ್ರಾಮ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2) ಈ ಪ್ರಕರಣದಲ್ಲಿ ದೂರುದಾರರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ 2012-13ನೇ ಸಾಲಿನಲ್ಲಿ ಮುಂಗಾರಿನಲ್ಲಿ ಬೆಳೆ ಹಾನಿಗೊಂಡ ರೈತರ ಪೈಕಿ ಮೊದಲನೇ ಕಂತಿನ 1967 ಫಲಾನುಭವಿಗಳ ಬಾಬ್ತು ರೂ.31,96,300/- ಹಾಗೂ 2ನೇ ಕಂತಿನ 105 ಫಲಾನುಭವಿಗಳ ಬಾಬ್ತು ರೂ.1,72,180/- ಪರಿಹಾರದ ಹಣವನ್ನು ಹೊನ್ನಾಳಿ ತಾಲ್ಲೂಕು ತಹಶೀಲ್ದಾರ್‌ರವರು ನೀಡಿದ್ದು, 2ನೇ ಕಂತಿನಲ್ಲಿ ಬಿಡುಗಡೆಯಾದ ಹಣದ ಶೇ.90 ರಷ್ಟು ಹಣವನ್ನು ಫಲಾನುಭವಿಗಳಿಗೆ ನೀಡದೆ ಎದುರುದಾರರು ದುರುಪಯೋಗ ಪಡಿಸಿಕೊಂಡಿರುತ್ತಾರೆ. ಈ ಬಗ್ಗೆ ಹೊನ್ನಾಳಿಯ ಸಹಾಯಕ ಕೃಷಿ ನಿರ್ದೇಶಕರು ಮತ್ತು ಹೊನ್ನಾಳಿ ತಾಲ್ಲೂಕು ತಹಶೀಲ್ದಾರ್‌ರವರಿಗೆ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳದೆ ಎದುರುದಾರರೊಂದಿಗೆ ಶಾಮೀಲಾಗಿರುತ್ತಾರೆ. ಈ ಬಗ್ಗೆ ತನಿಖೆ ಕೈಗೊಳ್ಳಬೇಕೆಂದು ಕೋರಿ ದೂರನ್ನು ಸಲ್ಲಿಸಿರುತ್ತಾರೆ.

3) ದೂರುದಾರರ ದೂರಿನ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ದಾವಣಗೆರೆ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಿಗೆ ಆದೇಶಿಸಲಾಗಿತ್ತು. ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ,

ದಾವಣಗೆರೆ ಇವರು ವರದಿಯನ್ನು ಸಲ್ಲಿಸಿದ್ದು, ವರದಿಯಲ್ಲಿ ಶ್ರೀ.ಸಿದ್ದೇಶ್, ಮುಖ್ಯ ಕಾರ್ಯದರ್ಶಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಯರಗನಾಳು ಇವರಿಗೆ 2012-13ನೇ ಸಾಲಿನಲ್ಲಿ ಬೆಳಗುತ್ತಿ ಹೋಬಳಿಯಲ್ಲಿನ ಜಮೀನುಗಳಲ್ಲಿ ಹಾಳಾದ ಬೆಳೆಗಳಿಗೆ ಸರ್ಕಾರದಿಂದ ಮಂಜೂರಾದ ಬೆಳೆ ಪರಿಹಾರದ ಮೊತ್ತವನ್ನು ವಿತರಣೆ ಮಾಡಲು ಹೊನ್ನಾಳಿ ತಹಶೀಲ್ದಾರ್ ಹಾಗೂ ಸಹಾಯಕ ಕೃಷಿ ನಿರ್ದೇಶಕರು ವಹಿಸಿದ್ದು, ಸದರಿಯವರು ಸಂಬಂಧಪಟ್ಟ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನಿಯಮಾನುಸಾರ ಬೆಳೆ ಪರಿಹಾರ ಮೊತ್ತವನ್ನು ಜಮಾ ಮಾಡದೆ ನೇರವಾಗಿ ಫಲಾನುಭವಿಗಳಿಗೆ ನಗದಾಗಿ ವಿತರಿಸಿ ಒಟ್ಟು ರೂ.25,920/- ಬೆಳೆ ಪರಿಹಾರದ ಮೊತ್ತವನ್ನು ದುರುಪಯೋಗ ಪಡಿಸಿಕೊಂಡಿರುವುದು ವಿಚಾರಣಾ ಕಾಲದಲ್ಲಿ ಫಲಾನುಭವಿ/ವಾರಸುದಾರರು ನೀಡಿದ ಹೇಳಿಕೆಗಳಿಂದ ಮೇಲ್ನೋಟಕ್ಕೆ ಕಂಡುಬಂದಿರುತ್ತದೆಯೆಂದು ಹೇಳಿರುತ್ತಾರೆ.

4) ತನಿಖಾಧಿಕಾರಿಯ ವರದಿಯ ಮೇಲೆ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿದ್ದು, ಆಕ್ಷೇಪಣೆಯಲ್ಲಿ 13 ಜನ ಫಲಾನುಭವಿಗಳ ಪೈಕಿ 11 ಜನ ಚೆಕ್ ಲಿಸ್ಟ್‌ನಲ್ಲಿ ಸಹಿ ಮಾಡಿ ಹಣವನ್ನು ಪಡೆದಿರುತ್ತಾರೆ. ಇನ್ನಿಬ್ಬರು ಫಲಾನುಭವಿಗಳ ಹಣವನ್ನು ತಹಶೀಲ್ದಾರ್, ಹೊನ್ನಾಳಿ ಇವರಿಗೆ ವಾಪಸ್ಸು ಕಳುಹಿಸಲಾಗಿದೆ. ಫಲಾನುಭವಿಗಳ ಹೇಳಿಕೆಯನ್ನು ಹೊನ್ನಾಳಿ ಪ್ರವಾಸಿ ಮಂದಿರದಲ್ಲಿ ಪಡೆಯಲಾಗಿದೆ. ಹಣ ಪಡೆಯಲು ವಂಶವೃಕ್ಷ, ಮರಣ ದಾಖಲೆ ಮತ್ತು ಮತದಾರರ ಚೀಟಿಯನ್ನು ಕೊಟ್ಟಿರುತ್ತಾರೆ. ಆದರೂ ವೈಯಕ್ತಿಕ ಕಾರಣಗಳಿಂದ ಸುಳ್ಳು ಹೇಳಿರುತ್ತಾರೆಂದು ಹೇಳಿರುತ್ತಾರೆ.

5) ತನಿಖಾಧಿಕಾರಿಯ ವರದಿಯನ್ನು ಪರಿಶೀಲಿಸಿದಾಗ, ರೈತರ ಪರಿಹಾರ ಹಣವನ್ನು ಫಲಾನುಭವಿಗಳ ಖಾತೆಗೆ ಜಮಾ ಮಾಡಲು ನಿಯಮವಿದ್ದರೂ ಸಹ ಎದುರುದಾರರು ಅದನ್ನು ಉಲ್ಲಂಘಿಸಿ ನಗದಾಗಿ ಸಹಾಯ ಧನವನ್ನು ನೀಡಿರುವುದು ಕಂಡುಬರುತ್ತದೆ. ಅದಲ್ಲದೆ ಕೆಲವು ಫಲಾನುಭವಿಗಳಿಗೆ ಸುಳ್ಳು ಹೆಬ್ಬೆಟು ಮತ್ತು ಸಹಿಗಳನ್ನು ಹಾಕಿಸಿ ನಿಜವಾದ ಫಲಾನುಭವಿಗಳಿಗೆ ಸಹಾಯ ಧನ ತಲುಪದೆ ಸಹಾಯ ಧನ ನೀಡಲಾಗಿದೆಯೆಂದು ದಾಖಲಾತಿ ಸೃಷ್ಟಿಸಿರುವುದು ಕೂಡ ಕಂಡುಬರುತ್ತದೆ. ಮೇಲಿನ ಅಂಶಗಳನ್ನು ಗಮನಿಸಿದಾಗ, ಪರಿಹಾರದ ಹಣವನ್ನು ಫಲಾನುಭವಿಗಳಿಗೆ ನೀಡಲು ಎದುರುದಾರರ ಸುಪರ್ದಿಗೆ ನೀಡಿದ್ದು, ಅದನ್ನು ಅವರು ಸೂಕ್ತ ರೀತಿಯಲ್ಲಿ ಫಲಾನುಭವಿಗಳಿಗೆ ತಲುಪಿಸಲು ವಿಫಲರಾಗಿದ್ದು, ಸದರಿ ಪರಿಹಾರ ಮೊತ್ತದಲ್ಲಿ ಅವ್ಯವಹಾರ ನಡೆಸಿರುವುದು ಮತ್ತು ಕಾನೂನು ಹಾಗೂ ನಿಯಮ ಉಲ್ಲಂಘನೆ ನಡೆಸಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ, ಎದುರುದಾರರ ವಿರುದ್ಧ ಶಿಸ್ತು ಕ್ರಮದ ಜೊತೆಗೆ ದುರುಪಯೋಗವಾಗಿರುವ ಹಣವನ್ನು ವಸೂಲಾತಿ ಮಾಡುವುದು ಕೂಡ ಅವಶ್ಯವಿರುತ್ತದೆ.

6) ಮೇಲ್ಕಂಡ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ, 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಕ್ಷಮ ಪ್ರಾಧಿಕಾರಕ್ಕೆ ಬೆಳೆ ಪರಿಹಾರ ಹಣ

ವಿತರಣೆಯಲ್ಲಿ ಅವ್ಯವಹಾರವಾಗಿರುವ ಹಣವನ್ನು ವಸೂಲಾತಿ ಮಾಡಲು ಈ ಮೂಲಕ ಶಿಫಾರಸ್ಸು ಮಾಡಲಾಗಿರುತ್ತದೆ. ತದನಂತರ ಸಕ್ಷಮ ಪ್ರಾಧಿಕಾರವು ಈ ಸಂಸ್ಥೆಗೆ ಅಲ್ಲಿಂದ **ಒಂದು ತಿಂಗಳೊಳಗೆ** ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(2) ರಡಿಯಲ್ಲಿ ಕೈಗೊಳ್ಳಲಾದ ಕ್ರಮದ ಬಗ್ಗೆ ವರದಿ ಸಲ್ಲಿಸುವುದು.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

Sd/- 10/2/12.
(ನ್ಯಾಯಮೂರ್ತಿ ಸುಭಾಷ್ ಬಿ. ಆಡಿ)
ಉಪಲೋಕಾಯುಕ್ತರು-2,
ಕರ್ನಾಟಕ ರಾಜ್ಯ, ಬೆಂಗಳೂರು.